ಸ್ಥಳೀಯ ಸಂಸ್ಥೆಗಳ ಮೂಲಭೂತ ಸೌಕರ್ಯಗಳು

5414 (5430); ಶ್ರೀ ಪಾಟೀಲ್ ಜೆ. ಟಿ. (ಬೀಳಗಿ)

ಅ) ಸ್ಥಳೀಯ ಸಂಸ್ಥೆಗಳ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲು ನಗರೋತ್ಥಾನ 3ನೇ ಹಂತವನ್ನು ಕೈಗೆತ್ತಿಕೊಳ್ಳಲಾಗಿವುದೇ;

ಆ) ನಗರೋತ್ಥಾನ 3ನೇ ಹಂತವನ್ನು ಕೈಗೆತ್ತಿಕೊಳ್ಳಲು ಇರುವ ತೊಂದರೆಗಳೇನು;

ಇ) ಪಟ್ಟಣ ಪಂಚಾಯಿತಿಗಳಿಗೆ ಹಣಕಾಸಿನ ತೊಂದರೆಯಿಂದ ಯಾವುದೇ ಅಭಿವೃದ್ಧಿ ಕೆಲಸಗಳನ್ನು ಪ್ರಾರಂಭಿಸಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಡಾ: ಖಮರುಲ್ ಇಸ್ಲಾಂ (ಮಾನ್ಯ ಪೌರಾಡಳಿತ, ನಗರ ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

ಅ) ಮಾನ್ಯ ಮುಖ್ಯಮಂತ್ರಿಗಳ 2015–16ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ (339) ರಲ್ಲಿ ಸಿಎಂಎಸ್ಎಂಟಿಡಿಪಿ ನಗರೋತ್ಥಾನ ಹಂತ–3 ರ ಯೋಜನೆಯನ್ನು ಜಾರಿಗೊಳಿಸಲು ಘೋಷಣೆ ಮಾಡಲಾಗಿದ್ದು, ಯೋಜನೆಯ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಆ) ಈ ಯೋಜನೆಗೆ ಅಗತ್ಯವಿರುವ ಆರ್ಥಿಕ ಸಂಪನ್ಮೂಲಗಳ ಲಭ್ಯತೆಯನ್ನು ಖಚಿತಪಡಿಸಿಕೊಂಡು ಕಾರ್ಯಕ್ರಮ ರೂಪಿಸಲು ಕ್ರಮಕೈಗೊಳ್ಳಲಾಗುತ್ತಿದೆ.

ಇ) ಪಟ್ಟಣ ಪಂಚಾಯಿತಿಗಳಿಗೆ ನಗರೋತ್ಥಾನ ಹಂತ–1 ಮತ್ತು ಹಂತ–2ರ ಯೋಜನೆಯಡಿ ಈಗಾಗಲೇ ಅನುದಾನವನ್ನು ಈ ಕೆಳಕಂಡಂತೆ ಸರ್ಕಾರವು ಹಂಚಿಕೆ ಮಾಡಿರುತ್ತದೆ.

	(ರೂ. ಕೋಟಿಗಳಲ್ಲಿ)
ಸಿಎಂಎಸ್‌ಎಂಟಿಡಿಪಿ ನಗರೋತ್ಥಾನ ಹಂತ–1	
ತಾಲ್ಲೂಕು ಕೇಂದ್ರದ ಪಟ್ಟಣ ಪಂಚಾಯಿತಿಗಳು	5.00
ಇತರೆ ಪಟ್ಟಣ ಪಂಚಾಯಿತಿಗಳು	2.00
ಸಿಎಂಎಸ್‌ಎಂಟಿಡಿಪಿ ನಗರೋತ್ಥಾನ ಹಂತ–2	
ರಾಜ್ಯದ ಎಲ್ಲಾ ಪಟ್ಟಣ ಪಂಚಾಯಿತಿಗಳು	5.00

ಈ ಅನುದಾನದೊಂದಿಗೆ ಎಸ್‌ಎಫ್‌ಸಿ ಮುಕ್ತನಿಧಿ ಅನುದಾನ ಮತ್ತು 14ನೇ ಹಣಕಾಸು ಆಯೋಗದ ಅನುದಾನದಡಿ ಪಟ್ಟಣ ಪಂಚಾಯಿತಿಗಳಿಗೆ ಅನುದಾನವನ್ನು ಒದಗಿಸಲಾಗಿರುತ್ತಿದೆ.

ಹಂಚಿಕೆ ಮಾಡಿರುವ ಈ ಮೊತ್ತದಿಂದ ಪಟ್ಟಣ ಪಂಚಾಯಿತಿಗಳು ಅಭಿವೃದ್ಧಿ ಕಾಮಗಾರಿಗಳನ್ನು ನಿಯಮಾನುಸಾರ ಕೈಗೊಳ್ಳಬಹುದಾಗಿದೆ.

ಈ) ಈ ಯೋಜನೆಗೆ ಅಗತ್ಯವಿರುವ ಆರ್ಥಿಕ ಸಂಪನ್ಮೂಲಗಳ ಲಭ್ಯತೆಯನ್ನು ಖಚಿತಪಡಿಸಿಕೊಂಡು ಕಾರ್ಯಕ್ರಮ ಪ್ರಾರಂಭಿಸಿತು ಕ್ರಮಕೈಗೊಳ್ಳಲಾಗುತ್ತಿದೆ.

ಜಾನುಬಾರುಗಳಿಗೆ ಕಾಲು ಬಾಯಿ ರೋಗದ ನಿಯಂತ್ರಣ

5415 (5415); ಶ್ರೀ ಪಿಳ್ಳ ಮುನಿಶಾಮಪ್ಪ (ದೇವನಹಳ್ಳಿ)

ಅ) ದೇವನಹಳ್ಳಿ ಮತಕ್ಷೇತ್ರದಲ್ಲಿ ಜಾನುವಾರುಗಳಿಗೆ ಕಾಲು ಬಾಯಿ ರೋಗ ಹಾಗೂ ಇತರೆ ರೋಗಗಳು ಯಾವುದಾದರೂ ಇದೆಯೇ, ಇದ್ದಲ್ಲಿ, ಸಾಕಷ್ಟು ಔಷಧಿಗಳ ದಾಸ್ತಾನು ಇದೆಯೇ;

ಆ) ಹಾಗಿದ್ದಲ್ಲಿ, ಈ ಮತಕ್ಷೇತ್ರದಲ್ಲಿ ಪಶುಸಂಗೋಪನಾ ಇಲಾಖೆಯಲ್ಲಿ ರೈತರಿಗೆ ಮಾಹಿತಿ ನೀಡಲು ಸಿಬ್ಬಂದಿಗಳು ಸಾಕಷ್ಟು ಸಂಖ್ಯೆಯಲ್ಲಿ ಇದ್ದಾರೆಯೇ;